**All India Radio: Bangalore**
**National Bulletin In Kannada**
**28.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಉತ್ತರ ಪ್ರದೇಶದಲ್ಲಿ ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹಂತ-೧ಅನ್ನು ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
2. ವಿಶ್ವ ವ್ಯಾಪಾರ ಸಂಸ್ಥೆ ಸಮ್ಮೇಳನ; ಅಭಿವೃದ್ಧಿಶೀಲ ರಾಷ್ಟ್ರಗಳ ಸಮಾನ ಅವಕಾಶಕ್ಕೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಆಗ್ರಹ
3. ಮನ್ ಕಿ ಬಾತ್‌ನ ೧೩೨ನೇ ಸಂಚಿಕೆಯಲ್ಲಿ ನಾಳೆ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ
4. ಐಪಿಎಲ್ ಕ್ರಿಕೆಟ್ ೧೯ನೇ ಆವೃತ್ತಿ ಇಂದಿನಿಂದ ಆರಂಭ; ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಸನ್‌ರೈಸರ್ಸ್ ಹೈದರಾಬಾದ್ ಮುಖಾಮುಖಿ

<><><><>

ಉತ್ತರ ಪ್ರದೇಶದ ಜೇವರ್‌ನಲ್ಲಿರುವ ನೋಯ್ಡಾ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಹಂತ-೧ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು. ಈ ವಿಮಾನ ನಿಲ್ದಾಣವನ್ನು ಸುಮಾರು ೧೧ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಒಟ್ಟು ಹೂಡಿಕೆಯೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ. ಈ ವಿಮಾನ ನಿಲ್ದಾಣದ ಉದ್ಘಾಟನೆ ಜಾಗತಿಕ ವಿಮಾನಯಾನ ಕೇಂದ್ರವಾಗುವತ್ತ ಸಾಗಿರುವ ಭಾರತದ ಪಯಣದಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಪ್ರಧಾನಿ, ನೋಯ್ಡಾದ ಈ ವಿಮಾನ ನಿಲ್ದಾಣದ ಅಭಿವೃದ್ಧಿಯಿಂದಾಗಿ ಉತ್ತರಪ್ರದೇಶದ ಆಗ್ರಾ, ಮಥುರಾ, ಅಲಿಗಢ್, ಗಾಜಿಯಾಬಾದ್, ಮೀರಟ್, ಇಟಾವ, ಬುಲೆಂದ್‌ಶೆಹರ್, ಫರೀದಾಬಾದ್ ಸೇರಿದಂತೆ ಎಲ್ಲಾ ಪ್ರದೇಶಗಳಲ್ಲಿ ಲಾಭದಾಯಕವಾಗಲಿದೆ. ರಾಜ್ಯದ ರೈತರು, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಯುವಕರಿಗೆ ಹಲವು ಹೊಸ ಅವಕಾಶಗಳನ್ನು ಈ ವಿಮಾನ ನಿಲ್ದಾಣ ಸೃಷ್ಟಿಸಲಿದೆ ಎಂದು ತಿಳಿಸಿದರು.

**ಧ್ವನಿ: ಪ್ರಧಾನಮಂತ್ರಿ (೨೫ ಸೆಕೆಂಡ್‌ಗಳು)**

<><><><>

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಇದೇ ೩೦ರಂದು ಮೇರಾ ಬೂತ್ ಸಬ್‌ಸೆ ಮಜಬೂತ್ ಅಭಿಯಾನದಡಿ ಅಸ್ಸಾಂ ಮತ್ತು ಪುದುಚೇರಿಯ ಪಕ್ಷದ ಕಾರ್ಯಕರ್ತರೊಂದಿಗೆ ನಮೋ ಆಪ್ ಮೂಲಕ ಸಂವಾದ ನಡೆಸಲಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ, ಕಳೆದ ದಶಕದಲ್ಲಿ ಅಸ್ಸಾಂ ಸಾಧಿಸಿರುವ ಅಭಿವೃದ್ಧಿ ಎಲ್ಲರಿಗೂ ಸ್ಪಷ್ಟವಾಗಿ ಕಾಣಸಿಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಈ ರಾಜ್ಯ ಸಾಧಿಸಿರುವ ಪ್ರಗತಿಯಿಂದಾಗಿ ಜನತೆ ಪುನಃ ತಮ್ಮ ಪಕ್ಷಕ್ಕೆ ಅಧಿಕಾರ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಳೆದ ೫ ವರ್ಷಗಳಲ್ಲಿ ಎನ್‌ಡಿಎ ಸರ್ಕಾರ ಪುದುಚೆರಿಯಲ್ಲಿನ ಜನರ ಆಶೋತ್ತರಗಳನ್ನು ಈಡೇರಿಸುವಲ್ಲಿ ಯಶಸ್ವಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

<><><><>

ವಿಶ್ವ ವ್ಯಾಪಾರ ಸಂಸ್ಥೆ - ಡಬ್ಲ್ಯೂಟಿಒನ ಚರ್ಚೆಗಳು ಉರುಗ್ವೆ ಸುತ್ತಿನ ಮಾತುಕತೆಗಳ ಸಂದರ್ಭದಲ್ಲಿ ಉಂಟಾದ ಅಸಮಾನತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸಾಗಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಕ್ಯಾಮರೂನ್‌ನಲ್ಲಿ ನಡೆಯುತ್ತಿರುವ ೧೪ನೇ ಸಚಿವ ಮಟ್ಟದ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜಾಗತಿಕ ವ್ಯಾಪಾರದಲ್ಲಿ ಎಲ್ಲಾ ಸದಸ್ಯ ರಾಷ್ಟ್ರಗಳಿಗೆ ಉತ್ಪಾದನಾ ಸಾಮರ್ಥ್ಯ ಹೆಚ್ಚಿಸಿಕೊಳ್ಳಲು, ಉದ್ಯೋಗ ಸೃಷ್ಟಿಸಲು ಮತ್ತು ಎಲ್ಲರಿಗೂ ಸಮಾನ ಭಾಗವಹಿಸುವಿಕೆಯ ನ್ಯಾಯಯುತ ಅವಕಾಶ ಸಿಗಬೇಕು ಎಂದು ತಿಳಿಸಿದರು.

**ಧ್ವನಿ: ಪಿಯೂಷ್ ಗೋಯಲ್**

ಸಮ್ಮೇಳನದ ಹಿನ್ನೆಲೆಯಲ್ಲಿ ಸಚಿವ ಪಿಯೂಷ್ ಗೋಯಲ್, ಹಲವು ಪ್ರಮುಖ ಜಾಗತಿಕ ನಾಯಕರೊಂದಿಗೆ ಸರಣಿ ಸಭೆಗಳನ್ನು ನಡೆಸಿದರು. ಅಮೆರಿಕ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ಅವರೊಂದಿಗೆ ಮಾತುಕತೆ ನಡೆಸಿದ ನಂತರ ಕೆನಡಾದ ಅಂತಾರಾಷ್ಟ್ರೀಯ ವ್ಯಾಪಾರ ಸಚಿವ ಮಣೀಂದರ್ ಸಿಧು ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ಇತ್ತೀಚಿನ ಭಾರತ-ಕೆನಡಾ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಮಾತುಕತೆಗಳ ಪ್ರಗತಿಯನ್ನು ಉಭಯ ನಾಯಕರು ಪರಾಮರ್ಶಿಸಿದರು.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೨ನೇ ಸಂಚಿಕೆಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು,

ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಜಾರ್ಖಂಡ್ ಪ್ರವಾಸ ಕೈಗೊಂಡಿದ್ದಾರೆ. ತಮ್ಮ ಭೇಟಿ ವೇಳೆ ಅವರು, ಖುಂಟಿ ಜಿಲ್ಲೆ ಉಲಿಹಟು ಗ್ರಾಮದಲ್ಲಿರುವ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮಸ್ಥಳದಲ್ಲಿ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಇಂದು ಉಪರಾಷ್ಟ್ರಪತಿ, ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್- ಐಐಎಂ ರಾಂಚಿಯ ೧೫ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪಾಲ್ಗೊಳ್ಳುವ ಕಾರ್ಯಕ್ರಮವಿದೆ.

<><><>

ನೇಪಾಳದ ನೂತನ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಆರ್‌ಎಸ್‌ಪಿಯ ಸಂಸದೀಯ ನಾಯಕ ಬಲೇಂದ್ರ ಶಾ, ಪ್ರಧಾನಿ ನರೇಂದ್ರ ಮೋದಿ ಅವರ ಅಭಿನಂದನಾ ಸಂದೇಶಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ಬಹು ಆಯಾಮದ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಆಶಯ ವ್ಯಕ್ತಪಡಿಸಿರುವ ಅವರು, ಜನರ ಯೋಗಕ್ಷೇಮ ಕುರಿತ ಹಂಚಿಕೆಯ ದೃಷ್ಟಿಕೋನದೆಡೆಗೆ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ನೇಪಾಳ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಬಲೀಂದ್ರ ಶಾ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಶುಭಾಶಯ ತಿಳಿಸಿದ್ದರು.

<><><>

ಕಳೆದ ವರ್ಷದ ನೇಪಾಳದಾದ್ಯಂತ ಸಂಚಲನ ಮೂಡಿಸಿದ್ದ ಝೆನ್ ಜಿ ಪ್ರತಿಭಟನೆಯನ್ನು ಹತ್ತಿಕ್ಕಲು ನಡೆಸಿದ ಕಠಿಣ ಕ್ರಮಗಳ ಹಿನ್ನೆಲೆಯಲ್ಲಿ ನೇಪಾಳದ ಮಾಜಿ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರನ್ನು ಇಂದು ಬಂಧಿಸಲಾಗಿದೆ. ಕಠ್ಮಂಡುವಿನಲ್ಲಿ ಪೂರ್ವಕ್ಕೆ ಸುಮಾರು ೧೨ ಕಿಲೋಮೀಟರ್ ದೂರದಲ್ಲಿರುವ ಭಕ್ತಪುರ ಜಿಲ್ಲೆಯಲ್ಲಿ ಓಲಿ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ನೇಪಾಳ ನೂತನ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಮರು ದಿನವೇ ಬಲೇಂದ್ರ ಶಾ ಈ ಕ್ರಮ ಕೈಗೊಂಡಿದ್ದಾರೆ. ಓಲಿ ಅವರ ಜೊತೆಗೆ ಮಾಜಿ ಗೃಹ ಸಚಿವ ರಮೇಶ್ ಲೇಖಕ್ ಅವರನ್ನೂ ಬಂಧಿಸಲಾಗಿದೆ.

<><><>

ಒಡಿಶಾದ ನಯಾಗಢ್ ಜಿಲ್ಲೆ ಹನುಮಾನ್ ಘಾಟಿಯಲ್ಲಿ ನಿನ್ನೆ ತಡರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ನಾಲ್ವರು ಮಹಿಳೆಯರು ಸೇರಿದಂತೆ ಕನಿಷ್ಠ ಐವರು ಮೃತಪಟ್ಟಿದ್ದಾರೆ. ೪೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಸುಮಾರು ೬೦ ಪ್ರಯಾಣಿಕರನ್ನು ಹೊತ್ತಿದ್ದ ಖಾಸಗಿ ಪ್ರಯಾಣಿಕ ಬಸ್, ಬೆಹ್ರಾಂಪುರದಿಂದ ಹರಿಶಂಕರ್‌ಗೆ ತೆರಳುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ, ರಸ್ತೆ ಬದಿಯ ಬಂಡೆಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಮಾಹಿತಿ ದೊರೆತ ತಕ್ಷಣ ಪೊಲೀಸ್ ತಂಡಗಳು ಅಗ್ನಿಶಾಮಕ ಹಾಗೂ ತುರ್ತುಪಡೆಯೊಂದಿಗೆ ಘಟನಾ ಸ್ಥಳಕ್ಕೆ ಧಾವಿಸಿ, ರಕ್ಷಣಾ ಕಾರ್ಯ ಕೈಗೊಂಡಿದ್ದಾರೆ. ಗಾಯಾಳುಗಳನ್ನು ಮೊದಲಿಗೆ ದಸ್ಪಲ್ಲಾ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಯಿತು. ಗಂಭೀರವಾಗಿ ಗಾಯಗೊಂಡಿದ್ದ ೧೫ ಜನರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.

<><><><>

ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಕೇಂದ್ರಾಡಳಿತ ಪ್ರದೇಶಗಳನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಜೋಜಿಲಾ ಪಾಸ್‌ನಲ್ಲಿ ವಾಹನಗಳು ಹಿಮಪಾತಕ್ಕೆ ಸಿಲುಕಿ ಏಳು ಜನರು ಮೃತಪಟ್ಟಿದ್ದು, ಹಲವಾರು ಮಂದಿ ಗಾಯಗೊಂಡಿದ್ದಾರೆ. ಘಟನೆಯ ನಂತರ ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಗಿದ್ದು, ಹಿಮವನ್ನು ತೆರವುಗೊಳಿಸುವ ಪ್ರಯತ್ನಗಳು ಮುಂದುವರಿದಿದೆ. ಘಟನೆಯಲ್ಲಿ ಏಳು ಜನರು ಮೃತಪಟ್ಟಿರುವ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ದೃಢಪಡಿಸಿದ್ದಾರೆ. ಘಟನೆಗೆ ಸಂತಾಪ ಸೂಚಿಸಿರುವ ಅವರು , ಗಾಯಾಳುಗಳಿಗೆ ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು. ಲಡಾಖ್ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಕೂಡ ಈ ಘಟನೆಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ.

<><><><>

ಪಶ್ಚಿಮ ಬಂಗಾಳದ ವಿವಿಧ ಭಾಗಗಳಲ್ಲಿ ಸಂಭವಿಸಿರುವ ಹಿಂಸಾಚಾರ ಮತ್ತು ಅಶಾಂತಿಕಾರಕ ಘಟನೆಗಳ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಪೊಲೀಸ್ ಆಡಳಿತದ ಮೇಲೆ ಕಣ್ಗಾವಲನ್ನು ತೀವ್ರಗೊಳಿಸಿದೆ. ಮುಂದಿನ ತಿಂಗಳು ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ಮುನ್ನೆಚ್ಚರಿಕೆ ವಹಿಸಲು ಎಲ್ಲಾ ಹಂತದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ನಿರ್ದೇಶನದಂತೆ ಎಲ್ಲಾ ಜಾಮೀನುರಹಿತ ಬಂಧನ ವಾರಂಟ್‌ಗಳನ್ನು ಜಾರಿಗೊಳಿಸಬೇಕು ಮತ್ತು ತಲೆಮರೆಸಿಕೊಂಡಿರುವ ಆರೋಪಿಗಳನ್ನು ಬಂಧಿಸಲು ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ.

<><><><>

೧೯ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಗೆ ಇಂದು ಅದ್ಧೂರಿ ಚಾಲನೆ ದೊರೆಯಲಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಆ ಮೂಲಕ ಮೇ ೩೧ರ ವರೆಗೆ ನಡೆಯಲಿರುವ ಎರಡು ತಿಂಗಳ ಅವಧಿಯ ಈ ಟೂರ್ನಿ ಇಂದು ಆರಂಭವಾಗಲಿದೆ. ಈ ಬಾರಿ ಆರ್‌ಸಿಬಿ ನಾಯಕ ರಜತ್ ಪಾಟೀದಾರ್ ಸಾರಥ್ಯದಲ್ಲಿ ಕಣಕ್ಕಿಳಿಯುತ್ತಿದ್ದರೆ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಇಶಾನ್ ಕಿಶಾನ್ ಮುನ್ನಡೆಸಲಿದ್ದಾರೆ. ಈ ನಡುವೆ, ಸಿಎಸ್‌ಕೆ ತಂಡದ ತಾರಾ ಕ್ರಿಕೆಟಿಗ ಎಂ.ಎಸ್. ಧೋನಿ ಸ್ನಾಯು ಸೆಳೆತದ ಸಮಸ್ಯೆಯಿಂದ ಬಳಲುತ್ತಿದ್ದು, ಮೊದಲೆರಡು ವಾರಗಳ ಕಾಲ ಪಂದ್ಯಗಳಿಂದ ಹೊರಗುಳಿಯುವ ಸಾಧ್ಯತೆ ಇದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>